ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ	:	**1662**
ಸದಸ್ಯರ ಹೆಸರು	:	**ಶ್ರೀ. ಎಂ.ಎ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**
ಉತ್ತರಿಸುವ ಸಚಿವರು	:	**ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು**
ಉತ್ತರಿಸಬೇಕಾದ ದಿನಾಂಕ	:	**19-03-2021**

ಕ್ರಸಂ	ಪ್ರಶ್ನೆ	ಉತ್ತರ
ಅ)	ಫೆಬ್ರುವರಿ-2021ರ ಮಾಹೆಯಲ್ಲಿ ಅಕಾಲಿಕವಾಗಿ ಸುರಿದ ಭಾರಿ ಆಲಿಕಲ್ಲು ಮಳೆಗೆ ಹಾಸನ ಜಿಲ್ಲೆಯಲ್ಲಿ ಸಾವಿರಾರು ಹೆಕ್ಟೇರ್ ಪ್ರದೇಶದ ಕೃಷಿ ಬೆಳೆಗಳು ನಾಶವಾಗಿ ರೈತರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನಾಶವಾಗಿರುವ ಬೆಳೆಗಳ ಸಮೀಕ್ಷೆ ನಡೆಸಲಾಗಿದೆಯೇ.(ವಿವರ ನೀಡುವುದು)	ಫೆಬ್ರುವರಿ-2021ರ ಮಾಹೆಯಲ್ಲಿ ಅಕಾಲಿಕವಾಗಿ ಸುರಿದ ಭಾರಿ ಆಲಿಕಲ್ಲು ಮಳೆಗೆ ಹಾಸನ ಜಿಲ್ಲೆಯಲ್ಲಿ ಸಾವಿರಾರು ಹೆಕ್ಟೇರ್ ಪ್ರದೇಶದ ಕೃಷಿ ಬೆಳೆಗಳು ನಾಶವಾಗಿ ರೈತರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಆಲಿಕಲ್ಲು ಮಳೆಯಿಂದ ಬೆಳೆ ಹಾನಿಯಾಗಿರುವುದರ ಬಗ್ಗೆ ಕಂದಾಯ ಇಲಾಖೆ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳಿಂದ ಜಂಟಿ ಬೆಳೆಹಾನಿ ಸಮೀಕ್ಷೆಯನ್ನು ನಡೆಸಲಾಗಿರುತ್ತದೆ. ಪ್ರಮುಖ ತೋಟಗಾರಿಕೆ ಬೆಳೆಗಳಾದ ಆಲೂಗಡ್ಡೆ, ಬಾಳೆ, ಕಾಳುಮೆಣಸು, ಅಡಿಕೆ ಮತ್ತು ಇತರೆ ತೋಟಗಾರಿಕೆ ಬೆಳೆಗಳ ಬೆಳೆಹಾನಿ ವರದಿಯನ್ನು ಕಂದಾಯ ಇಲಾಖೆಗೆ ಸಲ್ಲಿಸಲಾಗಿರುತ್ತದೆ.
ಆ)	ಈ ಆಲಿಕಲ್ಲು ಮಳೆಗೆ ಹಾಸನ ಜಿಲ್ಲೆಯಲ್ಲಿ ಯಾವ ಯಾವ ತೋಟಗಾರಿಕೆ ಬೆಳೆಗಳು ನಾಶವಾಗಿವೆ; ಇವುಗಳ ಪ್ರಮಾಣವೆಷ್ಟು; ನಷ್ಟದ ಅಂದಾಜು ಮೊತ್ತವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)	ಆಲಿಕಲ್ಲು ಮಳೆಗೆ ಹಾಸನ ಜಿಲ್ಲೆಯಲ್ಲಿ ಹಾನಿಗೊಳಗಾದ ತೋಟಗಾರಿಕೆ ಬೆಳೆಗಳು, ಇವುಗಳ ಪ್ರಮಾಣ, ನಷ್ಟದ ಅಂದಾಜು ಮೊತ್ತದ ತಾಲೂಕುವಾರು ಮಾಹಿತಿ ಈ ಕೆಳಕಂಡಂತಿರುತ್ತದೆ.

ಕ್ರ.ಸಂ	ಬೆಳೆ	ಬೆಳೆಹಾನಿ ವಿಸ್ತೀರ್ಣ (ಹೆ.)	
		ಅರಕಲಗೂಡು	ಹೊಳೆನರಸಿಪುರ
1	ಆಲೂಗೆಡ್ಡೆ	2.00	0.00
2	ಬಾಳೆ	6.00	0.40
3	ಕರಿಮೆಣಸು	16.00	0.00
4	ಅಡಿಕೆ	5.00	0.00
5	ಮೆಣಸಿನ ಕಾಯಿ	48.00	0.00
6	ಎಲೆಕೋಸು	12.00	0.00
7	ಸೇವಂತಿಗೆ	2.00	0.00

<table>
<tr><td></td><td></td><td>8</td><td>ಹಾಗಲಕಾಯಿ</td><td>0.00</td><td>0.40</td></tr>
<tr><td></td><td></td><td colspan="2">ಒಟ್ಟು</td><td>91.00</td><td>0.80</td></tr>
<tr><td></td><td></td><td colspan="2">ಬೆಳೆ ಹಾನಿಯ ಅಂದಾಜು ಮೊತ್ತ</td><td>64.92 ಲಕ್ಷ</td><td>0.58 ಲಕ್ಷ</td></tr>
<tr><td>ಇ)</td><td>ಈ ಮಳೆಯಿಂದ ಬೆಳೆ ನಷ್ಟ ಹೊಂದಿರುವ ರೈತರಿಗೆ ಪರಿಹಾರ ನೀಡಲು ಸರ್ಕಾರವು ಕ್ರಮಕೈಗೊಂಡಿದೆಯೇ;
ಕೈಗೊಂಡಿದ್ದಲ್ಲಿ, ಯಾವ ಯಾವ ಬೆಳೆಗಳಿಗೆ ಎಷ್ಟು ಪರಿಹಾರ ನೀಡಲಾಗುತ್ತಿದೆ? (ವಿವರ ನೀಡುವುದು)</td><td colspan="4">ಈ ಮಳೆಯಿಂದ ಬೆಳೆ ನಷ್ಟ ಹೊಂದಿರುವ ರೈತರಿಗೆ ಕಂದಾಯ ಇಲಾಖೆಯ ಮೂಲಕ ಪರಿಹಾರ ನೀಡಲು ಸರಕಾರದಿಂದ ಕ್ರಮ ಕೈಗೊಳ್ಳಲಾಗುತ್ತಿದೆ.

ರಾಷ್ಟ್ರೀಯ/ರಾಜ್ಯ ವಿಪತ್ತು ಪರಿಹಾರ ನಿಧಿ ಮಾರ್ಗಸೂಚಿಯನ್ವಯ ಶೇ. 33 ಕ್ಕಿಂತ ಹೆಚ್ಚಿನ ಪ್ರಮಾಣದ ಬೆಳೆ ಹಾನಿಗೆ ಪ್ರತಿ ಹೆಕ್ಟೇರ್ ವಾರ್ಷಿಕ ಮಳೆಯಾಶ್ರಿತ ಬೆಳೆಗಳಿಗೆ ರೂ.6800/-, ವಾರ್ಷಿಕ ನೀರಾವರಿ ಬೆಳೆಗಳಿಗೆ ರೂ.13500/- ಮತ್ತು ಬಹುವಾರ್ಷಿಕ ಬೆಳೆಗಳಿಗೆ ರೂ.18000/- ರಂತೆ ಪ್ರತಿ ಫಲಾನುಭವಿಗೆ 2.00 ಹೆಕ್ಟೇರ್ ವರೆಗೆ ಪರಿಹಾರಧನ ವಿತರಿಸಲಾಗುತ್ತದೆ.</td></tr>
</table>

HORTI 184 HGM 2021

(ಆರ್.ಶಂಕರ್)
ತೋಟಗಾರಿಕೆ ಮತ್ತು ರೇಷ್ಮೆ ಸಚಿವರು